ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 27/2/2021

# ಸಚಿವಾಲಯ ನೌಕರರಿಗೂ ವಸ್ತ್ರಸಂಹಿತೆ

ಸಂ.ಕ. ಸಮಾಚಾರ ಬೆಂಗಳೂರು

ವಿಧಾನಪರಿಷತ್ ಸಚಿವಾಲಯದ ನೌಕರರಿಗೆ ವಸ್ತ್ರಸಂಹಿತೆ ಜಾರಿಗೊಳಿಸಿ ಸುತ್ತೋಲೆ ಹೊರಡಿಸಲಾಗಿದೆ.

ಡಿ–ದರ್ಜೆ ನೌಕರರಿಗೆ ವಸ್ತ್ರ ಸಂಹಿತೆಯನ್ನು ಜಾರಿಗೊಳಿಸಲಾಗಿದ್ದು, ಪುರುಷ ನೌಕರರಿಗೆ ಬಿಳಿ ಬಣ್ಣದ ಉಡುಪು ಇದ್ದರೆ, ಮಹಿಳಾ ನೌಕರರಿಗೆ ಕೆಂಪು ಕಂದು ಬಣ್ಣದ ವಸ್ತ್ರ ಧರಿಸುವಂತೆ ಸೂಚನೆ ನೀಡಲಾಗಿದೆ.

ನೌಕರರು ಸೂಚಿಸಿದ ಸಮವಸ್ತ್ರಗಳನ್ನು ಧರಿಸಿ ಕರ್ತವ್ಯಕ್ಕೆ ಹಾಜರಾಗಲು ಸೂಚನೆ ನೀಡಲಾಗಿದ್ದು, ಚಾಲಕರೂ ಕಡ್ಡಾಯವಾಗಿ ಸಮವಸ್ತ್ರ ಧರಿಸಬೇಕೆಂದು ನಿರ್ದೇಶನ ನೀಡಲಾಗಿದೆ. ಈ ಸಂಬಂಧ ಪರಿಷತ್‌ನ ಕಾರ್ಯದರ್ಶಿ ಎಸ್. ಜಯಂತಿ ಈ ಕುರಿತಂತೆ ಸುತ್ತೋಲೆ ಹೊರಡಿಸಿದ್ದಾರೆ.

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ನೌಕರರುಗಳಲ್ಲಿ ಕರ್ತವ್ಯ ಪ್ರಜ್ಞೆ ಹಾಗೂ ಶಿಸ್ತು ಮೂಡಿಸುವ ನಿಟ್ಟಿನಲ್ಲಿ ಕಟ್ಟುನಿಟ್ಟಾಗಿ ನಿರ್ದೇಶನಗಳನ್ನು ಪಾಲನೆ ಮಾಡುವಂತೆ ಸೂಚಿಸಲಾಗಿದೆ. ತಪ್ಪಿದ್ದಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದೆಂದು ಸೂಚಿಸಲಾಗಿದೆ.

ಮಾರ್ಚ್ 1ರಿಂದ ಬಯೋಮೆಟ್ರಿಕ್ ಆಧಾರಿತ ಹಾಜರಾತಿಯನ್ನು ಕಡ್ಡಾಯವಾಗಿ ಮಾಡಬೇಕು. ಮಾರ್ಚ್ 15ರಿಂದ ಜಾರಿಗೆ ಬರುವಂತೆ ಡಿ ಗುಂಪು ನೌಕರರು ಕಡ್ಡಾಯವಾಗಿ ಪುರುಷರು ಬಿಳಿ ಬಣ್ಣ ಮತ್ತು ಮಹಿಳೆಯರು ಮೆರೂನ್ ಬಣ್ಣದ ಸಮವಸ್ತ್ರವನ್ನು ಧರಿಸಿ ಕರ್ತವ್ಯಕ್ಕೆ ಹಾಜರಾಗಬೇಕು. ಪಡಸಾಲೆಯಲ್ಲಿ ಗುಂಪು ಸೇರುವುದು ಹಾಗೂ ಮೊಬೈಲ್‌ನಲ್ಲಿ ಮಾತನಾಡುತ್ತಾ ನಿಲ್ಲುವುದನ್ನು ನಿಷೇಧಿಸಲಾಗಿದೆ. ಸಚಿವಾಲಯದ ಅಧಿಕಾರಿಗಳು ತಮ್ಮ ಅಸನದಲ್ಲಿರುವ ನೌಕರರುಗಳನ್ನು ಅಧಿಕೃತ ಕೆಲಸ ಕಾರ್ಯಗಳಿಗೆ ಮಾತ್ರ ಕಚೇರಿಯಿಂದ ಹೊರಗಡೆ ಹೋಗಲು ಅನುಮತಿ ನೀಡಬೇಕು ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.